# ಕರ್ನಾಟಕ ಸರ್ಕಾರ

ಸಂಖ್ಯೆ:ಮಮಇ 170 ಮಭಾಬ 2018

ಕರ್ನಾಟಕ ಸರ್ಕಾರದ ಸಚಿವಾಲಯ,<br>
ಬಹು ಮಹಡಿ ಕಟ್ಟಡ,<br>
ಬೆಂಗಳೂರು, ದಿನಾಂಕ:25.08.2018.

## ಸುತ್ತೋಲೆ

ವಿಷಯ: ಆಸ್ಪತ್ರೆಗಳಲ್ಲಿ ಜನಿಸಿದ ಮಕ್ಕಳನ್ನು ಕಾನೂನು ಬಾಹಿರವಾಗಿ ಪರಬಾರೆ ಮಾಡುತ್ತಿರುವ ಕುರಿತು

***************

ಸರ್ಕಾರಿ ಆಸ್ಪತ್ರೆ, ಹೆರಿಗೆ ಆಸ್ಪತ್ರೆ, ಖಾಸಗಿ ಆಸ್ಪತ್ರೆ ಹಾಗೂ ನರ್ಸಿಂಗ್ ಹೋಮ್‌ಗಳಲ್ಲಿ ಜನಿಸಿದ ಮಕ್ಕಳನ್ನು ಕೆಲ ತಾಯಂದಿರು ಬಿಟ್ಟುಹೋಗುತ್ತಿದ್ದು, ಇಂತಹ ಮಕ್ಕಳಿಗೆ ಬಾಲನ್ಯಾಯ ಕಾಯ್ದೆ, 2015ರ ಅನ್ವಯ ಪುನರ್ವಸತಿ ಕಲ್ಪಿಸಬೇಕಾಗಿರುತ್ತದೆ. ಇಂತಹ ಮಕ್ಕಳನ್ನು ಅನಧಿಕೃತವಾಗಿ ಇತರರಿಗೆ ನೀಡಲ್ಪಟ್ಟಲ್ಲಿ ಬಾಲನ್ಯಾಯ ಕಾಯ್ದೆ, 2015 ಹಾಗೂ ಬಾಲ ನ್ಯಾಯ ನಿಯಮಗಳು 2016 ರ ಅನ್ವಯ ಅಪರಾಧವೆಂದು ಪರಿಗಣಿಸಲ್ಪಟ್ಟಿದೆ.

- ಪರಿತ್ಯಕ್ತ ಮಕ್ಕಳನ್ನು ಗಮನಿಸಿದ್ದಲ್ಲಿ ಈ ಕೆಳಗಿನವರಿಗೆ ವರದಿ ಮಾಡದಿದ್ದಲ್ಲಿ ಅಪರಾಧ:
  ಬಾಲನ್ಯಾಯ ಕಾಯ್ದೆ(ಮಕ್ಕಳ ಪೋಷಣೆ ಮತ್ತು ರಕ್ಷಣೆ)2015 ರ ಸೆಕ್ಷನ್ 32, 33, 34 ರ ಅನ್ವಯ ವಿವರಿಸಿರುವಂತೆ ಯಾವುದೇ ವ್ಯಕ್ತಿ, ಯಾವುದೇ ಸಂಸ್ಥೆ, ಆಸ್ಪತ್ರೆ, ಹೆರಿಗೆ ಆಸ್ಪತ್ರೆಗಳಲ್ಲಿ ತೊರೆಯಲ್ಪಟ್ಟ ಮಕ್ಕಳನ್ನು 24 ಗಂಟೆಯೊಳಗಾಗಿ ಮಕ್ಕಳ ಸಹಾಯವಾಣಿ ಸಂಖ್ಯೆ-1098, ಪೋಲೀಸ್ ಠಾಣೆ, ಮಕ್ಕಳ ಕಲ್ಯಾಣ ಸಮಿತಿ ಅಥವಾ ಜಿಲ್ಲಾ ಮಕ್ಕಳ ರಕ್ಷಣಾ ಘಟಕ್ಕೆ ಮಾಹಿತಿ ನೀಡಬೇಕು. ವರದಿ ಮಾಡದಿದ್ದಲ್ಲಿ ಅಂತಹ ಅಪರಾಧಕ್ಕೆ 6 ತಿಂಗಳವರೆಗೆ ಕಾರಾಗೃಹ ವಾಸ ಅಥವಾ ರೂ.10,000/- ದಂಡ ಅಥವಾ ಎರಡನ್ನು ವಿಧಿಸಬಹುದು.

- ಕಾನೂನು ಬಾಹಿರವಾಗಿ ಮಕ್ಕಳನ್ನು ಮಾರುವುದು ಮತ್ತು ಕೊಳ್ಳುವುದು ಅಪರಾಧ:
  ಬಾಲ ನ್ಯಾಯ ನಿಯಮಗಳು 2016 ಸೆಕ್ಷನ್ 81 ರ ಅನ್ವಯ ಯಾವುದೇ ವ್ಯಕ್ತಿ ಮಕ್ಕಳನ್ನು ಮಾರುವುದು ಅಥವಾ ಕೊಳ್ಳುವುದು ಅಪರಾಧವಾಗಿದ್ದು, ಇಂತಹ ವ್ಯಕ್ತಿಗಳಿಗೆ 5 ವರ್ಷಗಳವರೆಗೆ ಕಠಿಣ ಕಾರಾಗೃಹ ಶಿಕ್ಷೆ ಮತ್ತು ರೂ.1,00,000/- ದಂಡ ವಿಧಿಸಬಹುದಾಗಿದೆ. ಇಂತಹ ಪ್ರಕರಣಗಳಲ್ಲಿ ಆಸ್ಪತ್ರೆ, ಹೆರಿಗೆ ಆಸ್ಪತ್ರೆ, ಅಥವಾ ನರ್ಸಿಂಗ್ ಹೋಂ ಸಿಬ್ಬಂದಿಯವರು ತೊಡಗಿಸಿಕೊಂಡಲ್ಲಿ ಅಂತಹವರಿಗೆ 3 ವರ್ಷಗಳಿಗೆ ಕಡಿಮೆ ಇಲ್ಲದಂತೆ 7 ವರ್ಷಗಳಿಗೆ ಕಾರಾಗೃಹ ಶಿಕ್ಷೆಯನ್ನು ವಿಸ್ತರಿಸಬಹುದಾಗಿದೆ.

ಈ ಮಾಹಿತಿಯನ್ನು ಖಾಸಗಿ ನರ್ಸಿಂಗ್ ಹೋಮ್‌ಗಳು ಸೇರಿದಂತೆ ಆಸ್ಪತ್ರೆಗಳಿಗೆ ಭೇಟಿ ನೀಡುವ ಸಾರ್ವಜನಿಕರಿಗೆ ಹಾಗೂ ಸಿಬ್ಬಂದಿಯವರಿಗೆ ಅರಿವು ಮೂಡಿಸುವುದು ಅಗತ್ಯವಾಗಿದೆ. ಖಾಸಗಿ ನರ್ಸಿಂಗ್ ಹೋಮ್‌ಗಳು ಸೇರಿದಂತೆ ಜಿಲ್ಲೆಯಲ್ಲಿರುವ ಎಲ್ಲಾ ಆಸ್ಪತ್ರೆಗಳ ಆವರಣದ ಪ್ರಮುಖ ಸ್ಥಳಗಳಲ್ಲಿ ಪ್ರದರ್ಶಿಸಲು ಈ ಕೆಳಗಿರುವ ಪ್ರದರ್ಶಕರು ಜಿಲ್ಲಾ ಆಸ್ಪತ್ರೆಗಳಲ್ಲಿ ಈ ಕೆಳಗಿನ ಮಾಹಿತಿಯನ್ನು Tin Plate ನಲ್ಲಿ ಅಳವಡಿಸುವುದು ಕಡ್ಡಾಯವಾಗಿರುತ್ತದೆ.

**ಮಕ್ಕಳ ಮಾರಾಟ ಅಪರಾಧ**

- "ಮಕ್ಕಳ ಮಾರಾಟ ಅಪರಾಧ". ಮಕ್ಕಳನ್ನು ಮಾರುವವರಿಗೂ ಹಾಗೂ ಕೊಳ್ಳುವವರಿಗೂ ಬಾಲ ನ್ಯಾಯ ಕಾಯ್ದೆ2015 ಸೆಕ್ಷನ್ 81ರ ಅನ್ವಯ 5 ವರ್ಷಗಳ ಸೆರೆಮನೆ ವಾಸದೊಂದಿಗೆ ರೂ.1,00,000/-ಗಳವರೆಗೆ ದಂಡ ವಿಧಿಸಬಹುದಾಗಿದೆ.
- "ಈ ಅಪರಾಧದಲ್ಲಿ ಆಸ್ಪತ್ರೆಯವರು ಶಾಮೀಲಾದರೆ ಶಿಕ್ಷೆಯ ಅವಧಿ 3 ವರ್ಷಗಳಿಗೆ ಕಡಿಮೆ ಇಲ್ಲದಂತೆ 7 ವರ್ಷಗಳವರೆಗೆ ವಿಸ್ತರಣೆ"
- ಹೆಚ್ಚಿನ ಮಾಹಿತಿಗಾಗಿ ಮಕ್ಕಳ ಸಹಾಯವಾಣಿ ದೂರವಾಣಿ ಸಂಖ್ಯೆ-1098ನ್ನು ಸಂಪರ್ಕಿಸುವುದು.

(ಉಮಾ ಮಹಾದೇವನ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಹಾಗು ವಿಕಲಚೇತನರ ಮತ್ತು ಹಿರಿಯ
ನಾಗರೀಕರ ಸಬಲೀಕರಣ ಇಲಾಖೆ

(ಜಾವೇದ್ ಅಖ್ತರ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

ಇವರಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ

(1) ಎಲ್ಲಾ ಜಿಲ್ಲೆಗಳ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು
(2) ಎಲ್ಲಾ ಜಿಲ್ಲೆಗಳ ಜಿಲ್ಲಾ ಶಸ್ತ್ರಚಿಕಿತ್ಸಕರು, ಜಿಲ್ಲಾ ಆಸ್ಪತ್ರೆ
(3) ಎಲ್ಲಾ ಜಿಲ್ಲೆಗಳ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
(4) ಎಲ್ಲಾ ಜಿಲ್ಲೆಗಳ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು
(5) ಮುಖ್ಯಸ್ಥರು, ವಿಶೇಷ ದತ್ತು ಕೇಂದ್ರಗಳು